**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 71/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಚಿಕ್ಕ ಕೂಸಯ್ಯ | ಫ್ರಾಸಾಃ 1 |
| ತಂದೆಯ/ಗಂಡನ ಹೆಸರು | | ಲೇಟ್ ಮೊಳ್ಳಯ್ಯ | ಚಾಸಾಃ 2 |
| ವಯಸ್ಸು | | 58 ವರ್ಷ | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಗಟ್ಟವಾಡಿಪುರ ಗ್ರಾಮ | ದಿಃ 10/01/2022 |

ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಯಿತು ಅದು ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ-1 ಎಂದು, ಅದರಲ್ಲಿರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 (ಎ) ಎಂದು ಗುರುತಿಸಲಾಯಿತು. ಸುಮಾರು 4 ವರ್ಷಗಳ ಹಿಂದೆ ಪೋಲಿಸರು ನಿಪಿ-1 ಕ್ಕೆ ನನ್ನ ಸಹಿ ಪಡಿದಿರುತ್ತಾರೆ. ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಿಪಿ-2 ನ್ನು ಯಾವ ವಿಚಾರವಾಗಿ ಬರೆಯಲಾಗಿದೆ ಎಂದು ಗೊತ್ತಿಲ್ಲ. ಅದರಲ್ಲಿರುವ ವಿಚಾರಗಳು ಗೊತ್ತಿಲ್ಲ. ಮತ್ತು ಪೋಲಿಸರು ನನ್ನ ಸಮಕ್ಷಮ 90 ಎಂ.ಎಲ್. ನ 42 ಪೌಚ್ ಗಳ ಒರಿಜಿನಲ್ ಚಾಯ್ಸ್ ವಿಸ್ಕಿ ಯನ್ನು ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡಿಲ್ಲ. ಆರೋಪಿಗಳನ್ನು ನಾನು ಈ ಹಿಂದೆ ನೋಡಿಲ್ಲ. ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಶ್ರೀ. ಎ.ಪಿ.ಪಿ.ಯವರಿಂದಃ

ದಿನಾಂಕ 16.03.2017 ರಂದು ರಾತ್ರಿ 9.45 ಗಂಟೆ ಸಮಯದಲ್ಲಿ ಹೆಡತಲೆ ಗ್ರಾಮದ ಮಹದೇವನಾಯಕ ರವರ ಎಂ.ಎಸ್.ಐ.ಎಲ್ ಮಳಿಗೆಯ ಮುಂಭಾಗ ಆರೋಪಿತರು ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಧ್ಯವನ್ನು ಮಾರಾಟ ಮಾಡುತ್ತಿದ್ದಾರೆ ಎಂದು ಚಾಸಾ-1 ರವರಿಗೆ ಮಾಹಿತಿ ಬಂದ ಮೇರೆಗೆ ನನ್ನನ್ನು ಮತ್ತು ಚಾಸಾ-3 ರವರನ್ನು ಈ ಕೇಸಿನ ವಿಚಾರ ತಿಳಿಸಿ ನಮ್ಮನ್ನು ಮಹಜರ್ ಸಾಕ್ಷಿಯಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಪೋಲಿಸರು ನನ್ನ ಸಮಕ್ಷಮ 90 ಎಂ.ಎಲ್. ನ 42 ಪೌಚ್ ಗಳ ಒರಿಜಿನಲ್ ಚಾಯ್ಸ್ ವಿಸ್ಕಿ ಟೆಟ್ರಾ ಪ್ಯಾಕೆಟ್ ಗಳನ್ನು ಆರೋಪಿತರು ಅಕ್ರಮವಾಗಿ ಮಾರಾಟ

ಮಾಡಲು ಎಂ.ಎಸ್.ಐ.ಎಲ್ ಅಲ್ಲಿ ಕೆಲಸ ಮಾಡುತ್ತಿದ್ದು ನಮ್ಮಗಳ ಸಮಕ್ಷಮ ಪೋಲಿಸರು ಆರೋಪಿತರನ್ನು ವಶಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲಿಸರು 90 ಎಂ.ಎಲ್. ನ 42 ಪೌಚ್ ಗಳ ಒರಿಜಿನಲ್ ಚಾಯ್ಸ್ ವಿಸ್ಕಿ ಟೆಟ್ರಾ ಪ್ಯಾಕೆಟ್ ಗಳ ಪೈಕಿ 28 ಪೌಚುಗಳನ್ನು ಆರ್ ಎಂಬ ಇಂಗ್ಲೀಷ್ ಅಕ್ಷರದಿಂದ ಸೀಲು ಮಾಡಿ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ ಖಾಲಿ ಟೆಟ್ರಾ ಪ್ಯಾಕೆಟ್ ಗಳು , ನೀರಿನ ಜಗ್ , ನೀರಿನ ಬಾಟಲಿ ಮತ್ತು ಪ್ಲಾಸ್ಟಿಕ್ ಲೋಟಗಳನ್ನು ನಮ್ಮಗಳ ಸಮಕ್ಷಮ ಮಹಜರ್ ಅನ್ನು ರಾತ್ರಿ 10.0 ಗಂಟೆಯಿಂದ 10.45 ಗಂಟೆಯವರೆಗೆ ಮಹಜರ್ ಬರೆದು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 17.3.2017 ರಂದು ಈಗ ಓದಿ ಹೇಳಿದಂತೆ ದಿನಾಂಕ 16.3.2017 ರಂದು - - - - ನೋಡಿದರೆ ಗುರುತಿಸುತ್ತೇನೆ ಎಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ತನ್ನ ಹೇಳಿಕೆ ಭಾಗವನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನನಗೆ ನಿಪಿ-1 ಮತ್ತು ನಿಪಿ-2 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ತಿಳಿದಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ</u> ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ,

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ ಎಂ ಒ

ಸಹಿ/-

1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ,
ನಂಜನಗೂಡು